ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಅಕ್ರಮ ಕಟ್ಟಡ ತೆರವುಗೊಳಿಸುವ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):-

259 (253) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ದೊಡ್ಡಕಲ್ಲಸಂದ್ರ ಗ್ರಾಮದ ಸರ್ವೆ ನಂ 55/1(ಪಿ),

55/2(ಪಿ), 56, 57, 58, 59(ಪಿ) ಮತ್ತು 60(ಪಿ) ರಲ್ಲಿ ಅತಿಕ್ರಮವಾಗಿ ನಿರ್ಮಿಸಿರುವ ಅಕ್ರಮ ಕಟ್ಟಡವನ್ನು ತೆರವುಗೊಳಿಸಲು ಮಾಲಿನ್ಯ ನಿಯಂತ್ರಣ ಮಂಡಳಿಯು ದಿನಾಂಕ 28-12-2018 ರಂದು ಆದೇಶ ನೀಡಿದ್ದು, ಈ ಕುರಿತು ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ದೊಡ್ಡಕಲ್ಲಸಂದ್ರ ಗ್ರಾಮದ ಸರ್ವೆ ನಂ 55/1(ಪಿ),

55/2(ಪಿ), 56, 57, 58 59(ಪಿ) ಮತ್ತು 60(ಪಿ) ರಲ್ಲಿ ಅತಿಕ್ರಮವಾಗಿ ನಿರ್ಮಿಸಿರುವ ಅಕ್ರಮ ಕಟ್ಟಡ ನಿರ್ಮಾಣದ ಕೆಲಸ ಕಾರ್ಯಗಳನ್ನು ನಿಲ್ಲಿಸಿ, ಸಂಪೂರ್ಣ ಪ್ರಾಜೆಕ್ಟ್ ಸೀeoï ಮಾಡಲು ಲಿಖಿತವಾಗಿ ಮಾಲಿನ್ಯ ನಿಯಂತ್ರಣ ಮಂಡಳಿ ಆದೇಶ ನೀಡಿದ ಬಳಿಕವೂ ಸಂಪೂರ್ಣ ಪ್ರಾಜೆಕ್ಟ್ ಸೀeoï ಮಾಡದಿರಲು ಕಾರಣವೇನು;

(ಇ) ದೊಡ್ಡಕಲ್ಲಸಂದ್ರ ಗ್ರಾಮದ ಸರ್ವೆ ನಂ 55/1(ಪಿ), 55/2(ಪಿ), 56, 57, 58 59(ಪಿ) ಮತ್ತು 60(ಪಿ) ರಲ್ಲಿ ಅತಿಕ್ರಮವಾಗಿ ನಿರ್ಮಿಸಿರುವ ಅಕ್ರಮ ಕಟ್ಟಡವನ್ನು ನಿಲಸಮಗೊಳಿಸುವ ಮೂಲಕ ತೆರವುಗೊಳಿಸಬೇಕೆಂದು

ಮಾಲಿನ್ಯ ನಿಯಂತ್ರಣ ಮಂಡಳಿ ಆದೇಶ ನೀಡಿದ

ಬಳಿಕವೂ ನೆಲಸಮಗೊಳಿಸದಿರಲು ಕಾರಣವೇನು; ನೆಲಸಮಗೊಳಿಸಲಾಗುವುದು ಯಾವಾಗ ?